# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಾರ್ವಜನಿಕ ಉದ್ದಿಮೆಗಳ ಇಲಾಖೆಯಲ್ಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸಲು ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** 1) 2022-23ನೇ ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಪುಸ್ತಕದ ಸಂಪುಟ-1 ಪುಟ ಸಂಖ್ಯೆ:86.

2) ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:ಎಫ್‌ಡಿ 01 ಬಿಪಿಇ 2022, ದಿನಾಂಕ:01.04.2022.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1) ರಲ್ಲಿ 2022-23ನೇ ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳು-ಬೇಡಿಕೆವಾರುವಿನಲ್ಲಿ ಸಾರ್ವಜನಿಕ ಉದ್ದಿಮೆಗಳ ಇಲಾಖೆಯಲ್ಲಿ ಕಾರ್ಯಗತಗೊಳಿಸುತ್ತಿರುವ 3 ಯೋಜನೆಗಳನ್ನು ಮುಂದುವರೆಸಲು, 2022-23ನೇ ಸಾಲಿನ ಆಯವ್ಯಯ ಅಂದಾಜಿನಲ್ಲಿ ಎರಡು ಲೆಕ್ಕ ಶೀರ್ಷಿಕೆಯಡಿ ರೂ.125.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮುಂದುವರೆದು, ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಅಧಿಕೃತ ಜ್ಞಾಪನ ಪತ್ರದ ಅನುಸೂಚಿಯಲ್ಲಿ ಸೂಚಿಸಿರುವ ಅನುದಾನವನ್ನು ದಿನಾಂಕ:01.04.2022 ರಿಂದ 31.03.2023ರ ವರೆಗಿನ ಅವಧಿಯಲ್ಲಿ ನಿಗದಿಪಡಿಸಿದ ಉದ್ದೇಶಕ್ಕಾಗಿ ಭರಿಸಲು ಅಧಿಕಾರ ನೀಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಒದಗಿಸಲಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ:

| ಕ್ರ.ಸಂ | ಲೆಕ್ಕ ಶೀರ್ಷಿಕೆ | ಅನುದಾನ (ರೂ ಲಕ್ಷಗಳಲ್ಲಿ) |
|---|---|---|
| 01 | 3451-00-091-0-01-015 | 75.00 |
| 02 | 3451-00-091-0-02-059 | 50.00 |
| | **ಒಟ್ಟು** | **125.00** |

ಸಾರ್ವಜನಿಕ ಉದ್ದಿಮೆಗಳ ಇಲಾಖೆಯಲ್ಲಿ ಕಾರ್ಯಗತಗೊಳಿಸುತ್ತಿರುವ ಯೋಜನಾ ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿಯೂ (ದಿನಾಂಕ:01-04-2022 ರಿಂದ 31-03-2023ರವರೆಗೆ) ಮುಂದುವರೆಸಿದೆ.

…2/

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಾಉಇ 39 ಎಆರ್ ಯು 2022,**

**ಬೆಂಗಳೂರು, ದಿನಾಂಕ: 11-04-2022**

2022-23ನೇ ಸಾಲಿನಲ್ಲಿ ಸಾರ್ವಜನಿಕ ಉದ್ದಿಮೆಗಳ ಇಲಾಖೆಯ ಮುಂದುವರೆದ ಮತ್ತು ಅನುಷ್ಠಾನಗೊಳಿಸುವ ಯೋಜನೆಗಳ ವಿವರ;

| ಕ್ರ.ಸಂ | ಯೋಜನೆ, ಲೆಕ್ಕ ಶೀರ್ಷಿಕೆ ಮತ್ತು ಕಾಂಪೊನೆಂಟ್ಸ್ ಗಳು | ಆಯವ್ಯಯ(ರೂ.ಲಕ್ಷಗಳಲ್ಲಿ) | |
|---|---|---|---|
| | | ಆರ್ಥಿಕ | ಭೌತಿಕ |
| ಅ) | ಸಾರ್ವಜನಿಕ ಉದ್ಯಮಗಳ ಮಹೋದ್ಯಮ<br>ಲೆಕ್ಕ ಶೀರ್ಷಿಕೆ:3451-00-091-0-01-015<br>(ಪೂರಕ ವೆಚ್ಚಗಳು) | 50.00 | ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸಾರ್ವಜನಿಕ ಉದ್ದಿಮೆಗಳಿಗೆ ರಾಜ್ಯ ಮಟ್ಟದ ಪ್ರಶಸ್ತಿ. |
| | | 25.00 | ಆಯ್ದ ಸಾರ್ವಜನಿಕ ಉದ್ದಿಮೆಗಳ ಮೌಲ್ಯಮಾಪನ ಪ್ರಕ್ರಿಯೆ. |
| ಆ) | ಬಂಡವಾಳ ಹಿಂತೆಗೆಯುವಿಕೆ ಮತ್ತು ಸಾರ್ವಜನಿಕ ಉದ್ಯಮಗಳ ಸುಧಾರಣೆ<br>ಲೆಕ್ಕ ಶೀರ್ಷಿಕೆ:3451-00-091-0-02-059<br>(ಇತರೆ ವೆಚ್ಚಗಳು) | 50.00 | ಸಾರ್ವಜನಿಕ ಉದ್ದಿಮೆಗಳ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮಗಳು |
| | ಒಟ್ಟು | **125.00** | |

ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

1. ಈ ಯೋಜನೆಗಳನ್ನು ಯಾವುದೇ ಕಾರಣಕ್ಕೂ 2022-23ನೇ ಸಾಲಿನಲ್ಲಿ ನಿಗದಿಪಡಿಸಿರುವ ಆಯವ್ಯಯಕ್ಕಿಂತ ಹೆಚ್ಚಿನ ವೆಚ್ಚ ಆಗದಂತೆ ಅನುಷ್ಠಾನಗೊಳಿಸುವುದು.
2. ಯೋಜನಾವಾರು ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ಹಂಚಿಕೆ ಮಾಡಿ ಎಂ.ಎಂ.ಆರ್/ಎಂಪಿಕ್ ಸಿದ್ಧಪಡಿಸಲು ಕ್ರಮ ಕೈಗೊಳ್ಳತಕ್ಕದ್ದು.

...3/

ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ:04-04-2022ರ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2022ರಲ್ಲಿ ಸರ್ಕಾರದ ಆಡಳಿತ ಇಲಾಖೆಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು

ಅವರ ಹೆಸರಿನಲ್ಲಿ

Mallikarjuna N.J. 11/04/22

(ಮಲ್ಲಿಕಾರ್ಜುನ ಎನ್.ಜೆ)

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)

ಸಾರ್ವಜನಿಕ ಉದ್ದಿಮೆಗಳ ಇಲಾಖೆ (ತಾಂತ್ರಿಕ)

ಇವರಿಗೆ:

1) ಪ್ರಧಾನ ಮಹಾಲೇಖಪಾಲರು(ಎ&ಇ), ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಸಾರ್ವಜನಿಕ ಉದ್ದಿಮೆಗಳ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ(ವೆಚ್ಚ-1 ಮತ್ತು ಬಂಡವಾಳ ಹೂಡಿಕೆ), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇ(ಲೆಕ್ಕಪತ್ರ-2), ಬಹುಮಹಡಿಗಳ ಕಟ್ಟಡ ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ
10) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರ್ವಜನಿಕ ಉದ್ದಿಮೆಗಳ ಇಲಾಖೆ
11) ಶಾಖಾ ರಕ್ಷಾ ಕಡತ/ಕಚೇರಿ ಪ್ರತಿ/ಹೆಚ್ಚುವರಿ ಪ್ರತಿ.